# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 44 ಗ್ರಾಪಂಸಿ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:07-03-2019.

ಇವರಿಂದ:
ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
**ಬೆಂಗಳೂರು.**

**ಇವರಿಗೆ:**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಎಲ್ಲಾ ಜಿಲ್ಲಾ ಪಂಚಾಯಿತಿಗಳು.

ಮಾನ್ಯರೆ,

**ವಿಷಯ:** ಹಿಂದಿನ ವಿಲೇಜ್ ಪಂಚಾಯಿತಿಗಳು ಅಥವಾ ಮಂಡಲ ಪಂಚಾಯಿತಿಗಳು ಅಥವಾ ಗ್ರಾಮ ಪಂಚಾಯಿತಿಗಳಲ್ಲಿ ಪೂರ್ಣಾವಧಿ ಕಾರ್ಯದರ್ಶಿ, ಲೆಕ್ಕಿಗರು, ಗುಮಾಸ್ತರು, ಬೆರಳಚ್ಚುಗಾರರು ಅಥವಾ ಬಿಲ್‌ಕಲೆಕ್ಟರ್‌ಗಳಿಗೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗೆ ಆಯ್ಕೆ ಮೂಲಕ ನೇರ ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 181 ಗ್ರಾಪಂಕಾ 2011, ದಿನಾಂಕ: 31-03-2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 44 ಗ್ರಾಪಂಸಿ 2015 ದಿನಾಂಕ: 22-04-2017.
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 44 ಗ್ರಾಪಂಸಿ 2015 ದಿನಾಂಕ: 27-02-2019.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (3) ರ ದಿನಾಂಕ:27-02-2019 ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ನ್ನು ರಚಿಸಲಾಗಿದೆ. (ಪ್ರತಿ ಲಗತ್ತಿಸಿದೆ) ಸದರಿ ನಿಯಮಗಳಲ್ಲಿ ಕರ್ನಾಟಕ ಸಿವಿಲ್ ಸೇವಾ (ಲಿಪಿಕ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮಗಳು, 2013 ದಿ:02-01-2014 ರಂದು ಜಾರಿಗೆ ಬಂದಿದ್ದು, ಹಿಂದಿನ ವಿಲೇಜ್ ಪಂಚಾಯಿತಿಗಳು ಅಥವಾ ಮಂಡಲ ಪಂಚಾಯಿತಿಗಳು ಅಥವಾ ಗ್ರಾಮ ಪಂಚಾಯಿತಿಗಳಲ್ಲಿ ಪೂರ್ಣಾವಧಿ ಕಾರ್ಯದರ್ಶಿ, ಲೆಕ್ಕಿಗರು, ಗುಮಾಸ್ತರು, ಬೆರಳಚ್ಚುಗಾರರು ಅಥವಾ ಬಿಲ್‌ಕಲೆಕ್ಟರ್‌ಗಳು ಆ ದಿನಾಂಕದಂದು ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿದ್ದು, ಅಂದು ಸೇವೆಯಲ್ಲಿರುವವರು, ಆಯ್ಕೆ ಮೂಲಕ ನೇರ ನೇಮಕಾತಿ ಹೊಂದಲು ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವುದನ್ನು ನಿಗಧಿಪಡಿಸಿರುವುದು ಅನ್ವಯಿಸುವುದಿಲ್ಲ ಎಂದು ನಿರ್ದಿಷ್ಟಪಡಿಸಲಾಗಿದೆ. ಅದರಂತೆ ಅಂತಹ ನೌಕರರಿಗೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆ ಆಧಾರದ ಮೇಲೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗೆ ಆಯ್ಕೆ ಮೂಲಕ ನೇರ ನೇಮಕಾತಿ ಮಾಡಲು ಕ್ರಮ ವಹಿಸುವಂತೆ ತಿಳಿಸಿದೆ.

ಮುಂದುವರೆದು ದಿನಾಂಕ: 02-01-2014 ರ ನಂತರ ಹಿಂದಿನ ವಿಲೇಜ್ ಪಂಚಾಯಿತಿಗಳು ಅಥವಾ ಮಂಡಲ ಪಂಚಾಯಿತಿಗಳು ಅಥವಾ ಗ್ರಾಮ ಪಂಚಾಯಿತಿಗಳಲ್ಲಿ ಪೂರ್ಣಾವಧಿ ಕಾರ್ಯದರ್ಶಿ, ಲೆಕ್ಕಿಗರು, ಗುಮಾಸ್ತರು, ಬೆರಳಚ್ಚುಗಾರರು ಅಥವಾ ಬಿಲ್‌ಕಲೆಕ್ಟರ್‌ಗಳು ಸೇವೆಯಲ್ಲಿರುವವರು, ಆಯ್ಕೆ ಮೂಲಕ ನೇರ ನೇಮಕಾತಿ ಹೊಂದಲು ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಬೇಕಾಗಿರುತ್ತದೆ ಎಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಮುಬಾರಕ್ ಅಹ್ಮದ್) 7/3

ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ:</u>

1. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಉಪ ಕಾರ್ಯದರ್ಶಿಗಳು (ಅಭಿವೃದ್ಧಿ).
2. ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
4. ಸಿಸ್ಟಮ್ ಮ್ಯಾನೇಜರ್, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ. (ವೆಬ್ ಸೈಟ್‌ನಲ್ಲಿ ಅಳವಡಿಸಲು)
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

FRNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-IVA | ಬೆಂಗಳೂರು, ಬುಧವಾರ, ಫೆಬ್ರವರಿ ೨೭, ೨೦೧೯ (ಫಾಲ್ಗುಣ ೮, ಶಕ ವರ್ಷ ೧೯೪೦) | ನಂ. ೧೩೮ |
|---|---|---|
| **Part-IVA** | ***Bengaluru, Wednesday, February 27, 2019 (Palguna 8, Shaka Varsha 1940)*** | **No. 138** |

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಗ್ರಾಅಪ 44 ಗ್ರಾಪಂಸಿ 2015, ಬೆಂಗಳೂರು, ದಿನಾಂಕ: 27-02-2019

ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ ಸಂಖ್ಯೆ.14) ರ ಕಲಂ 3ರ ಅಡಿಯ ಉಪಕಲಂ (2) ಖಂಡ (ಎ) ರಲ್ಲಿ ಅಗತ್ಯಪಡಿಸಲಾಗಿರುವಂತೆ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008ಕ್ಕೆ ತಿದ್ದುಪಡಿ ಮಾಡಲು ಕರಡು ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 44 ಗ್ರಾಪಂಸಿ 2015 ದಿನಾಂಕ:25-01-2019 ರ ಮೂಲಕ ದಿನಾಂಕ:25-01-2019 ರ ವಿಶೇಷ ಕರ್ನಾಟಕ ರಾಜ್ಯ ಪತ್ರದ ಭಾಗ-4ಎ ಸಂಖ್ಯೆ:66 ರಲ್ಲಿ ಪ್ರಕಟಿಸಿ ಸದರಿ ನಿಯಮಗಳಿಂದ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಪ್ರಕಟಣೆಯ ದಿನಾಂಕದಿಂದ ಹದಿನೈದು ದಿನಗಳ ಒಳಗಾಗಿ ಸಲ್ಲಿಸಲು ಆಹ್ವಾನಿಸಲಾಗಿದ್ದರಿಂದ;

ಸದರಿ ಕರಡನ್ನು ದಿನಾಂಕ:25-01-2019 ರಂದು ಸಾರ್ವಜನಿಕರಿಗೆ ದೊರೆಯುವಂತೆ ಮಾಡಲಾಗಿದ್ದರಿಂದ;

ಮತ್ತು ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ ಸ್ವೀಕರಿಸಲಾದ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸಿರುವುದರಿಂದ;

ಈಗ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ,1978 (1990 ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ರ ಕಲಂ 3 ರಡಿಯ ಉಪಕಲಂ (1) ಸಹವಾಚನ ಕಲಂ 8 ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಏನೆಂದರೆ;-

**ನಿಯಮಗಳು**

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ಅನುಸೂಚಿಯ ತಿದ್ದುಪಡಿ:-** ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008 ರ ಅನುಸೂಚಿಯಲ್ಲಿ ಕ್ರಮ ಸಂಖ್ಯೆ: 10 ರಲ್ಲಿನ "ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-2)" ಅಂಕಣ 5 ರಲ್ಲಿ ಉಪ ಶೀರ್ಷಿಕೆ "ಆಯ್ಕೆ ಮೂಲಕ ನೇರ ನೇಮಕಾತಿ", ನಂತರ ಈ ಕೆಳಕಂಡಂತೆ ಪರಂತಕವನ್ನು ಅಳವಡಿಸಿಕೊಳ್ಳತಕ್ಕದ್ದು, ಅದೇನೆಂದರೆ;-

"ಪರಂತು, ಕರ್ನಾಟಕ ಸಿವಿಲ್ ಸೇವಾ (ಲಿಪಿಕ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮಗಳು 2013 ದಿನಾಂಕ: 02-01-2014 ರಂದು ಜಾರಿಗೆ ಬಂದಿದ್ದು, ಹಿಂದಿನ ವಿಲೇಜ್ ಪಂಚಾಯಿತಿಗಳು ಅಥವಾ ಮಂಡಲ ಪಂಚಾಯಿತಿಗಳು ಅಥವಾ ಗ್ರಾಮ ಪಂಚಾಯಿತಿಗಳಲ್ಲಿ ಪೂರ್ಣಾವಧಿ ಕಾರ್ಯದರ್ಶಿ, ಲೆಕ್ಕಿಗರು, ಗುಮಾಸ್ತರು, ಬೆರಳಚ್ಚುಗಾರರು ಅಥವಾ ಬಿಲ್‌ಕಲೆಕ್ಟರ್‌ಗಳು ಆ ದಿನಾಂಕದಂದು ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿದ್ದು, ಅಂದು ಸೇವೆಯಲ್ಲಿರುವವರು, ಆಯ್ಕೆ

ಮೂಲಕ ನೇರ ನೇಮಕಾತಿ ಹೊಂದಲು ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವುದನ್ನು ನಿಗಧಿಪಡಿಸಿರುವುದು ಅನ್ವಯಿಸುವುದಿಲ್ಲ".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಮುಬಾರಕ್ ಅಹ್ಮದ್
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**RURAL DEVELOPMENT & PANCHAYATH RAJ SECRETARIAT**
**NOTIFICATION**
**No. RDP 44 GPC 2015, Bengaluru, Date: 27-02-2019**

Whereas the draft of the following rules further to amend the Karnataka General Service (Development Branch and Local Government Branch) (Cadre and Recruitment) Rules, 2008, was published as required by clause (a) of sub-section (2) of Section 3 read with Section 8 of the Karnataka State Civil Services Act, 1978 (Karnataka Act 14 of 1990) in Notification No. RDP 44 GPC 2015, dated:25-01-2019 in Part IV-A in the Karnataka Gazette Extra- ordinary No.66 dated 25th January 2019 inviting objections and suggestions from all persons likely to be affected there by within fifteen days from the date of its publication in the Official Gazette.

Whereas the said Gazette was made available to the public on 25th January 2019;

And whereas the objections and suggestions received in respect of the said draft rules have been considered, by the state Government;

Now, therefore, in exercise of the powers conferred by sub-section(1) of Section 3 read with Section 8 of the Karnataka State Civil Services Act, 1978 (Karnataka Act 14 of 1990), the Government of Karnataka hereby makes the following rules, namely;-

**RULES**

1. **Title and commencement:-** (1) These rules may be called the Karnataka General Services (Development Branch and Local Government Branch) (Cadre and Recruitment) (Amendment) Rules, 2019.

(2) They shall come into force from the date of their final publication in the Official Gazette.

**2. Amendment of the Schedule:-** In the Karnataka General Services (Development Branch and Local Government Branch) (Cadre and Recruitment) Rules, 2008, in the Schedule, in the entries relating to the category of post of "Gram Panchayat Secretary and Rural Development Assistant(Grade-II)", at serial number 10, in column number (5) under the sub-heading "for Direct Recruitment by selection", the following proviso shall be inserted at the end, namely:-

"Provided that, pass in pre-university course or equivalent qualification prescribed as qualification for direct recruitment by selection shall not be applicable for full time Secretaries, Clerks, Accountants, Typists or Bill-Collectors in the erstwhile Village Panchayats or Mandal Panchayats or in the Grama Panchayat who are already in service possessing SSLC qualification or equivalent qualification on the date of commencement of the Karnataka Civil Services (Recruitment to the Ministerial posts) (Amendment) Rules, 2013", which came into effect from 02-01-2014.

By order and in the name of the Governor of Karnataka,

**Mubarak Ahmed**
Deputy Director and Ex-Officio
Under Secretary to Government
Rural Development & Panchayath Raj Department.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 500